# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 586 |
| ಸದಸ್ಯರ ಹೆಸರು | : | ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13.12.2024. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಗ್ರಾಮ ಪಂಚಾಯತ್ ಸಿಬ್ಬಂದಿ ನೇಮಕಾತಿಯ ಅಧಿಕಾರವನ್ನು ಗ್ರಾಮ ಪಂಚಾಯಿತಿಯಿಂದ ಜಿಲ್ಲಾ ಪಂಚಾಯತಿಯ CEO ನೇತೃತ್ವದ ಸಮಿತಿಗೆ ವರ್ಗಾಯಿಸಿದ ನಂತರ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ನೇಮಕಾತಿ ಮಾಡಿಕೊಂಡ ಗ್ರಾಮ ಪಂಚಾಯತ್ ಸಿಬ್ಬಂದಿ ಮತ್ತು ಪ್ರಸ್ತುತ ಖಾಲಿಯಿರುವ ಗ್ರಾಮ ಪಂಚಾಯತ್ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)</td><td>
ಗ್ರಾಮ ಪಂಚಾಯಿತಿ ನೌಕರರಿಗೆ ಸಂಬಂಧಿಸಿದಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020 ನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29.09.2020ರಲ್ಲಿ ರೂಪಿಸಲಾಗಿರುತ್ತದೆ.
ಈ ನಿಯಮಗಳ ನಿಯಮ 4 ರಲ್ಲಿ ಆಯ್ಕೆ ಸಮಿತಿ ಬಗ್ಗೆ ಉಪಬಂಧವಿದ್ದು, ಗ್ರಾಮ ಪಂಚಾಯತಿಗಳಿಗೆ ಸಂಬಂಧಿಸಿದ ಹುದ್ದೆಗಳಿಗೆ ನೇರ ನೇಮಕಾತಿ ಮಾಡುವ ಸಲುವಾಗಿ ಆಯಾ ಜಿಲ್ಲೆಗಳಲ್ಲಿ ಸಂಬಂಧಿಸಿದ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿ ರಚಿಸಲು ಅವಕಾಶವಿರುತ್ತದೆ. ನೇಮಕಾತಿ ಪ್ರಾಧಿಕಾರವು ಸಂಬಂಧಿಸಿದ ಗ್ರಾಮ ಪಂಚಾಯಿತಿಯಾಗಿರುತ್ತದೆ.
ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ಪಂಚಾಯಿತಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಧ್ಯಕ್ಷತೆಯ ಗ್ರಾಮ ಪಂಚಾಯಿತಿ ಹುದ್ದೆಗಳ ಆಯ್ಕೆ ಸಮಿತಿಯ ಮೂಲಕ ಯಾವುದೇ ಹೊಸ ನೇಮಕಾತಿಗಳನ್ನು ಮಾಡಿಕೊಂಡಿರುವುದಿಲ್ಲ.
ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿಯಿರುವ ಸಿಬ್ಬಂದಿಗಳ ಸಂಖ್ಯೆ ವಿವರ ಈ ಕೆಳಕಂಡಂತಿದೆ.
<table>
<tr><th>ಹುದ್ದೆ</th><th>ದಕ್ಷಿಣ ಕನ್ನಡ ಜಿಲ್ಲೆಯ ಹುದ್ದೆಗಳ ಸಂಖ್ಯೆ:</th><th>ಉಡುಪಿ ಜಿಲ್ಲೆಯ ಹುದ್ದೆಗಳ ಸಂಖ್ಯೆ:</th></tr>
<tr><td>ಬಿಲ್ ಕಲೆಕ್ಟರ್</td><td>13</td><td>24</td></tr>
<tr><td>ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್</td><td>18</td><td>13</td></tr>
<tr><td>ವಾಟರ್ ಆಪರೇಟರ್</td><td>72</td><td>49</td></tr>
<tr><td>ಕ್ಲೀನರ್ಸ್</td><td>81</td><td>71</td></tr>
<tr><td>ಅಟೆಂಡೆಂಟ್</td><td>74</td><td></td></tr>
</table>
</td></tr>
</table>

| | | |
|---|---|---|
| (ಆ) | ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ದಿನಾಂಕ:26.06.2024ರ ಪತ್ರದಂತೆ ಗ್ರಾಮ ಪಂಚಾಯತ್‌ನಲ್ಲಿ ಖಾಲಿಯಿರುವ ಜವಾನ ಹುದ್ದೆಯನ್ನು ಕೈಬಿಟ್ಟು ಕೇವಲ ನಾಲ್ಕು ಹುದ್ದೆಗಳಿಗೆ (1. ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್, 2. ಬಿಲ್ ಕಲೆಕ್ಟರ್, 3. ಪಂಪು ಆಪರೇಟರ್, 4.ಸ್ವಚ್ಛತೆಗಾರ) ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಇ) | ಜವಾನ ಹುದ್ದೆಯನ್ನು ಕಡಿತ ಮಾಡಲು ಕಾರಣವೇನು; ಇನ್ನು ಮುಂದೆ ಜವಾನ ಹುದ್ದೆಯ ಜವಾಬ್ದಾರಿಗಳನ್ನು ಯಾರಿಗೆ ವಹಿಸಲಾಗುತ್ತಿದೆ; ಈಗಾಗಲೇ, ಸಿಬ್ಬಂದಿ ಕೊರತೆಯಿಂದಿರುವ ಗ್ರಾಮ ಪಂಚಾಯತಿಗಳಿಗೆ ಸರ್ಕಾರದ ಈ ಕ್ರಮದಿಂದ ಜವಾನ ಹುದ್ದೆ ಕಾರ್ಯನಿರ್ವಹಿಸಲು ಇಲ್ಲದೇ ಇರುವುದರಿಂದ ಜವಾನ ಹುದ್ದೆಯನ್ನು ಮುಂದುವರಿಸಲು ಯಾವ ಕ್ರಮ ಕೈಗೊಳ್ಳಲಾಗುವುದು? | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020 ರ ಸಿಬ್ಬಂದಿ ವರ್ಗದ ಮಾದರಿಯಲ್ಲಿ ಅಟೆಂಡೆಂಟ್ ಹುದ್ದೆಯನ್ನು ನಿರ್ದಿಷ್ಟಪಡಿಸಲಾಗಿದೆ. ಈ ಹುದ್ದೆಯನ್ನು ಸಿಬ್ಬಂದಿ ವರ್ಗದ ಮಾದರಿಯಿಂದ ಕಡಿತ ಮಾಡಿರುವುದಿಲ್ಲ.<br><br>ವಾಟರ್ ಆಪರೇಟರ್, ಅಟೆಂಡೆಂಟ್ ಮತ್ತು ಕ್ಲೀನರ್ಸ್ ಹುದ್ದೆಗಳನ್ನು ಬಹುಪಯೋಗಿ ಹುದ್ದೆಗಳೆಂದು ಪರಿಗಣಿಸಿರುವುದರಿಂದ ವಾಟರ್ ಆಪರೇಟರ್, ಅಟೆಂಡೆಂಟ್ ರವರು ಗ್ರಾಮ ಪಂಚಾಯಿತಿಯಲ್ಲಿ ಈ ಜವಾಬ್ದಾರಿಗಳನ್ನು ನಿರ್ವಹಿಸಬಹುದಾಗಿದೆ. |

ಸಂಖ್ಯೆ: ಗ್ರಾಅಪ 661 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.